## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ವಿಧಾನ ಪರಿಷತ್ತು ಸದಸ್ಯರು | : ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 43 |
| ಉತ್ತರಿಸಬೇಕಾದ ದಿನಾಂಕ | : 04.03.2025 |
| ಉತ್ತರಿಸಬೇಕಾದ ಸಚಿವರು | : ಸಹಕಾರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಚಿಕ್ಕಮಗಳೂರು ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಬೇಕೆಂದು ಸಾರ್ವಜನಿಕರಿಂದ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ | ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ. | ಸನ್ಮಾನ್ಯ ಮುಖ್ಯಮಂತ್ರಿಗಳು 2022-23 ನೇ ಸಾಲಿನ ಆಯವ್ಯಯದಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸುವ ಬಗ್ಗೆ ಘೋಷಣೆಯನ್ನು ಮಾಡಿರುತ್ತಾರೆ. |
| ಇ | ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಲು ಇರುವ ತೊಡಕುಗಳೇನು; ಹಾಗಿದ್ದಲ್ಲಿ ಪ್ರತ್ಯೇಕವಾದ ಹಾಲು ಒಕ್ಕೂಟವನ್ನು ಸ್ಥಾಪಿಸಲಾಗುವುದು ಯಾವಾಗ; ಈ ನಿಟ್ಟಿನಲ್ಲಿ ಆಗಿರುವ ಪ್ರಗತಿ ಏನು? | ಚಿಕ್ಕಮಗಳೂರು ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪನೆ ಸಂಬಂಧ ಎನ್.ಡಿ.ಡಿ.ಬಿ. ರವರಿಂದ ನಿರಾಕ್ಷೇಪಣಾ ಪತ್ರವನ್ನು ನೀಡುವಂತೆ ಕೋರಿ ದಿನಾಂಕ:17.08.2023 ಮತ್ತು ದಿನಾಂಕ:4.07.2024 ರಂದು ಹಾಸನ ಸಹಕಾರಿ ಹಾಲು ಒಕ್ಕೂಟದಿಂದ ಇ-ಮೇಲ್ ಮುಖಾಂತರ ಎನ್.ಡಿ.ಡಿ.ಬಿ. ರವರಿಗೆ ತಿಳಿಸಲಾಗಿರುತ್ತದೆ. ಮುಂದುವರೆದು ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕು ಸಖರಾಯಪಟ್ಟಣ ಹೋಬಳಿ ಹಸ್ತಿನಾಪುರ ಗ್ರಾಮದ ಸರ್ವೇ ನಂ.149/ಪಿ ರಲ್ಲಿ ತೋಟಗಾರಿಕಾ ಇಲಾಖೆಗೆ ಸೇರಿದ 28 ಎಕರೆ ಜಮೀನನ್ನು ಕಹಾಮಗೆ ಮಂಜೂರು ಮಾಡುವಂತೆ ಕೋರಿ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಸದರಿ ಜಮೀನು |

| | | |
|---|---|---|
| | | ತೋಟಗಾರಿಕಾ ಇಲಾಖೆಗೆ ಅವಶ್ಯಕವಾಗಿದ್ದು, ಕಹಾಮಗೆ ನೀಡಲು ಸಾಧ್ಯವಿಲ್ಲವೆಂದು ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರಭಾರ), ತೋಟಗಾರಿಕಾ ಇಲಾಖೆ ರವರು ಪತ್ರ ಸಂಖ್ಯೆ:HORTI 328 HGM 2020 ದಿನಾಂಕ:13.06.2024 ರಲ್ಲಿ ತಿಳಿಸಿರುವುದಾಗಿ ಚಿಕ್ಕಮಗಳೂರು ಜಿಲ್ಲಾಧಿಕಾರಿಯವರು ಮಾಹಿತಿ ನೀಡಿರುತ್ತಾರೆ. ಅಲ್ಲದೆ, ನಿರಾಕ್ಷೇಪಣಾ ಪತ್ರ ಪಡೆಯುವ ಸಂಬಂಧ ಎನ್.ಡಿ.ಡಿ.ಬಿ.ಗೆ ಕಹಾಮದಿಂದ ದಿನಾಂಕ: 26.12.2024 ರಂದು ಪತ್ರ ಬರೆಯಲಾಗಿರುತ್ತದೆ.<br><br>ಹಾಸನ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವ್ಯಾಪ್ತಿಯಿಂದ ಚಿಕ್ಕಮಗಳೂರು ಜಿಲ್ಲೆ ಮತ್ತು ಅರಸೀಕೆರೆ ತಾಲ್ಲೂಕಿನ ಕಾರ್ಯವ್ಯಾಪ್ತಿಯನ್ನು ಒಳಗೊಂಡಂತೆ ಪ್ರತ್ಯೇಕವಾದ ಚಿಕ್ಕಮಗಳೂರು ಜಿಲ್ಲೆ ಹಾಲು ಉತ್ಪಾದಕರ ಸಂಘಗಳ ಒಕ್ಕೂಟವನ್ನು ಸ್ಥಾಪಿಸುವ ಬಗ್ಗೆ 15 ದಿನಗಳೊಳಗಾಗಿ ಸಾಧ್ಯತಾ ವರದಿಯನ್ನು ಸಲ್ಲಿಸಲು ದಿನಾಂಕ:01-03-2025 ರಂದು ಕಹಾಮದ ವ್ಯವಸ್ಥಾಪಕ ನಿರ್ದೇಶಕರಿಗೆ ತಿಳಿಸಲಾಗಿದೆ. |

**ಕಡತ ಸಂಖ್ಯೆ: ಸಿಒ 29 ಸಿಸಿಬಿ 2025**

K. N. Rajanna

**(ಕೆ.ಎನ್.ರಾಜಣ್ಣ)**
ಸಹಕಾರ ಸಚಿವರು